# ಗಡಿಕನ್ನಡಿಗ

www.gadikannadiga.com

ಸಂಪಾದಕ:ಮುರುಗೇಶ ಬಿ.ಶಿವಪೂಜಿ

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ, ವಿಜಯಪುರ, ವಿಜಯನಗರ ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:22/ಸಂಚಿಕೆ:147 RNI NO.KAR KAN/2003/10452:No./PMG/KA/NK/BM/743/24-26 ಬುಧವಾರ ದಿನಾಂಕ: 08-05-2024 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com2


## ಬೆಳಗಾವಿ ಜಿಲ್ಲೆಯಲ್ಲಿ ಈ ಬಾರಿ ದಾಖಲೆಯ ಶೇ.74.87 ರಷ್ಟು ಮತದಾನ

ಬೆಳಗಾವಿ– ಬೆಳಗಾವಿ ಬೆಳಗಾವಿ ಜಿಲ್ಲೆಯಲ್ಲಿ ಈ ಬಾರಿ ದಾಖಲೆಯ ಶೇ.74.87 ರಷ್ಟು ಮತದಾನವಾಗಿದೆ.

ಚಿಕ್ಕೋಡಿ ಲೋಕಸಭಾ ಕ್ಷೇತ್ರದಲ್ಲಿ ಶೇ.78.51 ಮತ್ತು ಬೆಳಗಾವಿ ಲೋಕಸಭಾ ಕ್ಷೇತ್ರದಲ್ಲಿ ಶೇ.71.38ರಷ್ಟು ಮತದಾನವಾಗಿರುತ್ತದೆ. ಇದಲ್ಲದೇ ಕೆನರಾ ಲೋಕಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ಬೆಳಗಾವಿ ಜಿಲ್ಲೆಯ ಖಾನಾಪುರ ವಿಧಾನಸಭಾ ಕ್ಷೇತ್ರದಲ್ಲಿ ಶೇ.73.87 ಮತ್ತು ಕಿತ್ತೂರು ವಿಧಾನಸಭಾ ಕ್ಷೇತ್ರದಲ್ಲಿ ಶೇ. 76.25 ರಷ್ಟು ಮತದಾನವಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದ್ದಾರೆ.

ಕಳೆದ ಬಾರಿಗಿಂತ ಹೆಚ್ಚಿನ ಪ್ರಮಾಣದಲ್ಲಿ ಮತದಾನವಾಗಿದೆ. ಚಿಕ್ಕೋಡಿ ಲೋಕಸಭಾ ಕ್ಷೇತ್ರದಲ್ಲಿ 2019 ರಲ್ಲಿ ಶೇ.75.52 ರಷ್ಟು ಮತದಾನವಾಗಿದ್ದರೆ 2024 ರಲ್ಲಿ ಶೇ.78.51 ರಷ್ಟು ಮತದಾನವಾಗುವ ಮೂಲಕ ಪ್ರತಿಶತ 3 ರಷ್ಟು ಹೆಚ್ಚಳವಾಗಿರುತ್ತದೆ.

ಅದೇ ರೀತಿ ಬೆಳಗಾವಿ ಲೋಕಸಭಾ ಕ್ಷೇತ್ರದಲ್ಲಿ 2019 ರ ಚುನಾವಣೆಯಲ್ಲಿ ಶೇ. 67.70 ರಷ್ಟು ಮತದಾನವಾಗಿತ್ತು. ಈ ಬಾರಿ 2024 ರಲ್ಲಿ ಶೇ.71.38 ರಷ್ಟು ಮತದಾನವಾಗುವ ಮೂಲಕ ಪ್ರತಿಶತ 4 ರಷ್ಟು ಹೆಚ್ಚಳವಾಗಿರುತ್ತದೆ ಎಂದು ನಿತೇಶ್ ಪಾಟೀಲ ತಿಳಿಸಿದ್ದಾರೆ.

ಬೆಳಿಗ್ಗೆ 7 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಮತದಾನ ನಡೆಯಿತು. ಕೆಲವು ಕಡೆಗಳಲ್ಲಿ 6 ಗಂಟೆಯ ಒಳಗೆ ಮತಗಟ್ಟೆಯ ಸರದಿಯಲಿದ್ದ ಮತದಾರರಿಗೆ ಟೋಕನ್ ವಿತರಿಸಿದ ಬಳಿಕ ಮತದಾನಕ್ಕೆ ಅವಕಾಶ ಕಲ್ಪಿಸಲಾಯಿತು. ಜಿಲ್ಲೆಯ ಎಲ್ಲ ಕಡೆಗಳಲ್ಲೂ ಮತದಾನ ಶಾಂತಿಯುತವಾಗಿ ನಡೆದಿರುತ್ತದೆ.

ಬೆಳಗಾವಿ ಲೋಕಸಭಾ ಕ್ಷೇತ್ರದಲ್ಲಿ ಒಟ್ಟಾರೆ ಶೇ.ಶೇ.71.38 ರಷ್ಟು ಮತದಾನವಾಗಿರುತ್ತದೆ. ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಅರಭಾವಿ ವಿಧಾನಸಭಾ ಕ್ಷೇತ್ರದಲ್ಲಿ ಶೇ.71.92, ಗೋಕಾಕ ಶೇ.71.06 ಬೆಳಗಾವಿ(ಉತ್ತರ) ಶೇ.63.42 ಬೆಳಗಾವಿ(ದಕ್ಷಿಣ) ಶೇ.67.52 ಬೆಳಗಾವಿ(ಗ್ರಾಮೀಣ) ಶೇ.76.87 ಬೈಲಹೊಂಗಲ ಶೇ.73.5 ಸವದತ್ತಿ-ಯಲ್ಲಮ್ಮ ಶೇ.76.73 ಹಾಗೂ ರಾಮದುರ್ಗ ಶೇ.73.6 ಮತದಾನ ಆಗಿರುತ್ತದೆ.

ಚಿಕ್ಕೋಡಿ ಲೋಕಸಭಾ ಕ್ಷೇತ್ರದಲ್ಲಿ ಒಟ್ಟಾರೆ ಶೇ.78.51 ಮತದಾನವಾಗಿರುತ್ತದೆ.

ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ನಿಪ್ಪಾಣಿ ವಿಧಾನಸಭಾ ಕ್ಷೇತ್ರದಲ್ಲಿ ಶೇ. 79.73, ಚಿಕ್ಕೋಡಿ-ಸದಲಗಾ ಶೇ. 79.58 ಅಥಣಿ ಶೇ.78.66 ಕಾಗವಾಡ ಶೇ.78.84 ಕುಡಚಿ ಶೇ. 74.74 ರಾಯಬಾಗ ಶೇ.75.8 ಹುಕ್ಕೇರಿ ಶೇ.78.35 ಹಾಗೂ ಯಮಕನಮರಡಿ ಶೇ.82.14 ರಷ್ಟು ಮತದಾನ ಆಗಿರುತ್ತದೆ.

ಬೆಳಗಾವಿ ಹಾಗೂ ಚಿಕ್ಕೋಡಿ ಲೋಕಸಭಾ ಕ್ಷೇತ್ರಗಳ ಸಾಮಾನ್ಯ ವೀಕ್ಷಕರಾದ ಎಂ.ಕೆ.ಅರವಿಂದ ಕುಮಾರ್ ಹಾಗೂ ಜೆ.ಎಸ್.ಪಾಂಡಾ ದಾಸ್ ಅವರು ಕೂಡ ವಿವಿಧ ಮತಗಟ್ಟೆಗಳಿಗೆ ಭೇಟಿ ನೀಡಿ ಮತದಾನ ಸುಗಮ ಹಾಗೂ ಶಾಂತಿಯುತವಾಗಿರುವ ಬಗ್ಗೆ ಖಚಿತಪಡಿಸಿಕೊಂಡರು.

ಇದಲ್ಲದೇ ವೆಬ್ ಕ್ಯಾಸ್ಟಿಂಗ್ ವ್ಯವಸ್ಥೆಯ ಮೂಲಕ ಸೂಕ್ಷ್ಮ ಮತಗಟ್ಟೆಗಳಲ್ಲಿ ನಡೆದ ಮತದಾನ ಪ್ರಕ್ರಿಯೆಯನ್ನು ವೀಕ್ಷಿಸಿದರು.

ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಬೆಳಗಾವಿ ಲೋಕಸಭಾ ಕ್ಷೇತ್ರದ ಚುನಾವಣಾಧಿಕಾರಿ ನಿತೇಶ್ ಪಾಟೀಲ ಮತ್ತು ಚಿಕ್ಕೋಡಿ ಕ್ಷೇತ್ರದ ಚುನಾವಣಾಧಿಕಾರಿ ರಾಹುಲ್ ಶಿಂಧೆ ಅವರು ಕೂಡ ಮತಗಟ್ಟೆಗಳಿಗೆ ಭೇಟಿ ನೀಡಿ, ಮತದಾರರಿಗೆ ಒದಗಿಸಲಾಗಿರುವ ಮೂಲಸೌಕರ್ಯಗಳನ್ನು ಪರಿಶೀಲಿಸಿದರು.

ಮತದಾನದ ಬಳಿಕ ಚುನಾವಣಾ ಸಿಬ್ಬಂದಿಯು ತಮ್ಮ ತಮ್ಮ ಮತಗಟ್ಟೆಗಳಿಂದ ಎಲೆಕ್ಟ್ರಾನಿಕ್ ಮತಯಂತ್ರಗಳನ್ನು ಪೊಲೀಸ್ ಭದ್ರತೆಯೊಂದಿಗೆ ಆಯಾ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಡಿಮಸ್ಟರಿಂಗ್ ಕೇಂದ್ರಗಳಿಗೆ ರಾತ್ರಿಯವರೆಗೆ ತಲುಪಿಸಿದರು.

ಡಿಮಸ್ಟರಿಂಗ್ ಕೇಂದ್ರಗಳಿಂದ ಮತ ಎಣಿಕೆ ಕೇಂದ್ರಗಳಲ್ಲಿ ಸ್ಥಾಪಿಸಲಾಗಿರುವ ಸ್ಟ್ರಾಂಗ್ ರೂಮ್ ಗಳಿಗೆ ಮಧ್ಯರಾತ್ರಿಯವರೆಗೆ ಮತಯಂತ್ರಗಳನ್ನು ಕಳುಹಿಸಲಾಯಿತು.

ಬೆಳಗಾವಿ ಲೋಕಸಭಾ ಕ್ಷೇತ್ರದ ಮತ ಎಣಿಕೆ ಕೇಂದ್ರವನ್ನು ಬೆಳಗಾವಿ ನಗರದ ಆರ್.ಪಿ.ಡಿ. ಮಹಾವಿದ್ಯಾಲಯದಲ್ಲಿ ಹಾಗೂ ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಮತ ಎಣಿಕೆ ಕೇಂದ್ರವನ್ನು ಚಿಕ್ಕೋಡಿ ನಗರದ ಆರ್.ಡಿ.ಕಾಲೇಜಿನಲ್ಲಿ ಸ್ಥಾಪಿಸಲಾಗಿರುತ್ತದೆ. ಆಯಾ ಮತ ಎಣಿಕೆ ಕೇಂದ್ರಗಳ ಸ್ಟ್ರಾಂಗ್ ರೂಮ್ ಗಳಲ್ಲಿ ಮತಯಂತ್ರಗಳನ್ನು ಇರಿಸಲಾಗಿರುತ್ತದೆ. ಜೂನ್ 4 ರಂದು ಮತ ಎಣಿಕೆ ನಡೆಯಲಿದೆ.

ಭಾರತ ದೇಶದ ಚುನಾವಣಾ ಪ್ರಕ್ರಿಯೆ ವೀಕ್ಷಣೆಗೆ ಆಗಮಿಸಿರುವ ಐದು ದೇಶಗಳ ಚುನಾವಣಾ ಆಯೋಗಗಳ ಹತ್ತು ಜನ ಅಂತರ್ ರಾಷ್ಟ್ರೀಯ ನಿಯೋಗದ ಸದಸ್ಯರು ನಸುಕಿನ ಜಾವದಿಂದಲೇ ವಿವಿಧ ಮತಗಟ್ಟೆಗಳಿಗೆ ಭೇಟಿ ನೀಡಿ ಮತದಾನ ವೀಕ್ಷಿಸಿದರು.

ಬೆಳಗಾವಿ ಜಿಲ್ಲೆಗೆ ಆಗಮಿಸಿದ ಕಾಂಬೋಡಿಯಾ, ನೇಪಾಳ, ಮೊಲ್ಡೊವಾ, ಸಿಷೆಲ್ ಹಾಗೂ ತುನಿಷಿಯಾ ದೇಶಗಳ ಚುನಾವಣಾ ಆಯೋಗಗಳ ಹತ್ತು ಸದಸ್ಯರ ತಂಡವು ವಾಸ್ತವ ಮತದಾನ ಆರಂಭಕ್ಕಿಂತ ಮುಂಚೆ ನಡೆಯುವ ಅಣಕು ಮತದಾನ ಪ್ರಕ್ರಿಯೆಯನ್ನು ಕೂಡ ವೀಕ್ಷಿಸಿದರು.ಇದಲ್ಲದೇ ಸಖಿ ಮತಗಟ್ಟೆ(ಪಿಂಕ್ ಬೂತ್) ಸೇರಿದಂತೆ ವಿವಿಧ ಮತಟಗಟ್ಟೆಗಳಿಗೂ ಭೇಟಿ ನೀಡಿ ಚುನಾವಣಾ ಪ್ರಕ್ರಿಯೆಗಳ ಬಗ್ಗೆ ಮಾಹಿತಿಯನ್ನು ಪಡೆದುಕೊಂಡರು.

ಲೋಕಸಭೆ ಚುನಾವಣೆಯನ್ನು ಅತ್ಯಂತ ಶಾಂತಿಯುತ ಹಾಗೂ ಸುಗಮವಾಗಿ ನಡೆಸಲು ಸಹಕರಿಸಿದ ಜಿಲ್ಲೆಯ ಪ್ರತಿಯೊಬ್ಬ ನಾಗರಿಕರಿಗೆ, ಜನಪ್ರತಿನಿಧಿಗಳು, ಎಲ್ಲ ರಾಜಕೀಯ ಪಕ್ಷಗಳ ಮುಖಂಡರು, ಕಂದಾಯ, ಜಿಲ್ಲಾ ಪಂಚಾಯತಿ ಹಾಗೂ ಪೊಲೀಸ್ ಸೇರಿದಂತೆ ಪ್ರತಿಯೊಂದು ಇಲಾಖೆಗಳ ಅಧಿಕಾರಿಗಳು/ಸಿಬ್ಬಂದಿ, ಸ್ವೀಪ್ ಚಟುವಟಿಕೆಗಳಲ್ಲಿ ಭಾಗವಹಿಸುವ ಮೂಲಕ ಮತದಾನ ಹೆಚ್ಚಳಕ್ಕೆ ಕೈಜೋಡಿಸಿದ ಸಂಘ-ಸಂಸ್ಥೆಗಳು ಹಾಗೂ ಮಾಧ್ಯಮ ಪ್ರತಿನಿಧಿಗಳಿಗೆ ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ಮತ್ತು ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಚುನಾವಣಾಧಿಕಾರಿ ರಾಹುಲ್ ಶಿಂಧೆ ಅವರು ಕೃತಜ್ಞತೆ ಸಲ್ಲಿಸಿದ್ದಾರೆ.

### ಬಳ್ಳಾರಿ ಲೋಕಸಭೆ ಚುನಾವಣೆ; ಜಿಲ್ಲೆಯಾದ್ಯಂತ ಸುಸೂತ್ರ, ಶಾಂತಿಯುತ ಮತದಾನ

## ಬಳ್ಳಾರಿ ಜಿಲ್ಲೆಯಲ್ಲಿ ಶೇ.73.59 ರಷ್ಟು ಮತದಾನ

ಬಳ್ಳಾರಿ, ಮೇ 07-ಲೋಕಸಭೆ ಚುನಾವಣೆಗೆ ಸಂಬಂಧಿಸಿದಂತೆ, ಬಳ್ಳಾರಿ ಲೋಕಸಭಾ ಕ್ಷೇತ್ರ ವ್ಯಾಪ್ತಿಯ 08 ವಿಧಾನಸಭಾ (ವಿಜಯನಗರ ಜಿಲ್ಲೆ ಒಳಗೊಂಡಂತೆ) ಕ್ಷೇತ್ರಗಳ 1,972 ಮತಗಟ್ಟೆಗಳಲ್ಲಿ ಮೇ 07 ಮಂಗಳವಾರದಂದು ಸುಸೂತ್ರ ಹಾಗೂ ಶಾಂತಿಯುತ ಮತದಾನ ನಡೆದಿದ್ದು, ಒಟ್ಟು ಶೇ.73.59 ರಷ್ಟು ಮತದಾನ ಪ್ರಮಾಣವಾಗಿದೆ.

ಬಳ್ಳಾರಿ ಗ್ರಾಮೀಣ – ಶೇ.72.08, ಬಳ್ಳಾರಿ ನಗರ – ಶೇ. 65.12, ಹೂವಿನಹಡಗಲಿ – ಶೇ.75.05, ಹಗರಿಬೊಮ್ಮನಹಳ್ಳಿ– ಶೇ.77.98, ಕಂಪ್ಲಿ – ಶೇ.78.91, ಕೂಡ್ಲಿಗಿ – ಶೇ.76.58, ಸಂಡೂರು – ಶೇ. 75.27, ವಿಜಯನಗರ – ಶೇ.70.33 ರಷ್ಟು ಮತದಾನವಾಗಿದೆ.

*ಮತದಾನ ವಿವರ:*

ಬಳ್ಳಾರಿ ಲೋಕಸಭೆ ಕ್ಷೇತ್ರ ವ್ಯಾಪ್ತಿಯಲ್ಲಿ ಒಟ್ಟು 18,84,040 ಮತದಾರರಿದ್ದು, ಅದರಲ್ಲಿ 13,86,520 ಮತದಾರರು ತಮ್ಮ ಮತದ ಹಕ್ಕನ್ನು ಚಲಾಯಿಸಿದ್ದಾರೆ.

928857 ಪುರುಷ ಮತದಾರರಲ್ಲಿ 697349 ಪುರುಷರು (ಶೇ.75.08) ಮತ ಚಲಾಯಿಸಿದ್ದಾರೆ. 954914 ಮಹಿಳಾ ಮತದಾರರಲ್ಲಿ 689056 ಮಹಿಳೆಯರು (ಶೇ.72.16) ಮತದಾನ ಮಾಡಿದ್ದಾರೆ ಮತ್ತು 269 ಅಲ್ಪಸಂಖ್ಯಾತ ಮತದಾರರಲ್ಲಿ 115 ಮಂದಿ (ಶೇ.42.75) ಮತದಾನ ಮಾಡಿದ್ದಾರೆ.

ಜಿಲ್ಲೆಯಲ್ಲಿನ ಬಿರು ಬಿಸಿಲಿನ ತಾಪದ ಅರಿವಿದ್ದ ಮತದಾರರು ಮುಂಜಾನೆಯ ತಂಪು ಹೊತ್ತಿನಲ್ಲಿಯೇ ಹೋಗಿ ಮತ ಚಲಾಯಿಸಿಬಿಡೋಣ ಎಂಬ ಧಾವಂತದಲ್ಲಿ ಇದ್ದಿದ್ದು ಕಂಡುಬಂದಿತು. ಹೀಗಾಗಿ ಬೆಳಿಗ್ಗೆ 7 ಗಂಟೆಯಿಂದಲೇ ಮತದಾರರು ಮತಗಟ್ಟೆಗಳತ್ತ ಧಾವಿಸಿ, ಸರದಿ ಸಾಲಿನಲ್ಲಿ ನಿಂತು ಮತ ಚಲಾಯಿಸಿದ್ದು ಕಂಡುಬಂದಿತು. ಚುನಾವಣಾ ಆಯೋಗದ ನಿಯಮದಂತೆ ಬೆಳಿಗ್ಗೆ 07 ಗಂಟೆಗೆ ಜಿಲ್ಲೆಯಾದ್ಯಂತ ಪ್ರಾರಂಭಗೊಂಡ ಮತದಾನ, ಆರಂಭದಲ್ಲಿ ಬಿರುಸಿನಿಂದ ಜರುಗಿತು. ಸೂರ್ಯ ನೆತ್ತಿಯ ಮೇಲೆ ಏರುತ್ತಿದ್ದಂತೆಯೇ ಮಧ್ಯಾಹ್ನದ ವೇಳೆಗೆ ಸ್ವಲ್ಪ ಮಂದಗತಿಯಲ್ಲಿ ಸಾಗಿದ ಮತದಾನ, ನಂತರ ಸಂಜೆ ವೇಳೆಗೆ ಇನ್ನಷ್ಟು ಬಿರುಸಿನಿಂದ ಸಾಗಿತು. ಮತದಾರರನ್ನು ಆಕರ್ಷಿಸಲು ಬಳ್ಳಾರಿ ಜಿಲ್ಲೆಯ 4 ಕ್ಷೇತ್ರಗಳಲ್ಲಿ ಜಿಲ್ಲಾಡಳಿತದಿಂದ ವಿಭಿನ್ನ ಪರಿಕಲ್ಪನೆಯ ಮತಗಟ್ಟೆಗಳನ್ನು ತೆರೆಯಲಾಗಿತ್ತು. ಸಖಿ ಮತಗಟ್ಟೆ, ಯುವ ಮತಗಟ್ಟೆ, ವಿಕಲಚೇತನ ಮತಗಟ್ಟೆ, ಸಾಂಪ್ರದಾಯಿಕ ಮತ್ತು ವಿಷಯಾಧಾರಿತ ಮತಗಟ್ಟೆಗಳು ಆಕರ್ಷಕವಾಗಿದ್ದು, ಮತದಾರರನ್ನು ತನ್ನತ್ತ ಸೆಳೆಯುತ್ತಿದ್ದಂತೆ ಕಂಡುಬಂದಿತು.

ಬಳ್ಳಾರಿ ಜಿಲ್ಲೆಯಲ್ಲಿ ಒಟ್ಟು 1,219 ಮತಗಟ್ಟೆ ಕೇಂದ್ರಗಳನ್ನು ಸ್ಥಾಪಿಸಲಾಗಿತ್ತು. ಕಂಪ್ಲಿ-242, ಸಿರುಗುಪ್ಪ-228, ಬಳ್ಳಾರಿ ಗ್ರಾಮೀಣ-235, ಬಳ್ಳಾರಿ ನಗರ-261 ಹಾಗೂ ಸಂಡೂರು ಕ್ಷೇತ್ರದ 253 ಮತಗಟ್ಟೆಗಳಲ್ಲಿ ಮತದಾನವು ಬಹುತೇಕ ಸುಸೂತ್ರ ಹಾಗೂ ಶಾಂತಿಯುತವಾಗಿ ನಡೆಯಿತು.

*ಬಳ್ಳಾರಿ ಲೋಕಸಭಾ ಕ್ಷೇತ್ರದಲ್ಲಿ ನಡೆದ ಶೇಕಡಾವಾರು ಮತದಾನ ಪ್ರಮಾಣ ವಿವರ ಇಂತಿದೆ:*

ಬೆಳಿಗ್ಗೆ 07 ಗಂಟೆಗೆ ಪ್ರಾರಂಭಗೊಂಡ ಮತದಾನ ಬೆ. 9 ಗಂಟೆಯವರೆಗೆ ಒಟ್ಟು ಶೇ.10.37 ಮತದಾನ ಪ್ರಮಾಣವಾಗಿದ್ದು, ಬಳ್ಳಾರಿ ಗ್ರಾಮೀಣ-ಶೇ.11.06, ಬಳ್ಳಾರಿ ನಗರ-ಶೇ.10.43, ಹೂವಿನಹಡಗಲಿ-ಶೇ.6.60, ಹಗರಿಬೊಮ್ಮನಹಳ್ಳಿ- ಶೇ.9.24, ಕಂಪ್ಲಿ – ಶೇ.13.06, ಕೂಡ್ಲಿಗಿ – ಶೇ.10.09, ಸಂಡೂರು – ಶೇ.9.91, ವಿಜಯನಗರ – ಶೇ.11.83 ರಷ್ಟು ಮತದಾನವಾಯಿತು.

ಬೆಳಿಗ್ಗೆ 11 ಗಂಟೆಯ ವೇಳೆಗೆ ಒಟ್ಟು ಶೇ.26.45 ಮತದಾನ ಪ್ರಮಾಣವಾಗಿದ್ದು, ಬಳ್ಳಾರಿ ಗ್ರಾಮೀಣ – ಶೇ.27.16, ಬಳ್ಳಾರಿ ನಗರ – ಶೇ.25.54, ಹೂವಿನಹಡಗಲಿ – ಶೇ.21.29, ಹಗರಿಬೊಮ್ಮನಹಳ್ಳಿ-ಶೇ.24.21, ಕಂಪ್ಲಿ – ಶೇ.31.53, ಕೂಡ್ಲಿಗಿ – ಶೇ.27.93, ಸಂಡೂರು – ಶೇ.25.70, ವಿಜಯನಗರ – ಶೇ.27.79 ರಷ್ಟು ಮತದಾನವಾಗಿದೆ.

ಮಧ್ಯಾಹ್ನ 01 ಗಂಟೆಯವರೆಗೆ ಒಟ್ಟು ಶೇ.44.36 ಮತದಾನ ಪ್ರಮಾಣವಾಗಿದ್ದು, ಬಳ್ಳಾರಿ ಗ್ರಾಮೀಣ – ಶೇ.44.05, ಬಳ್ಳಾರಿ ನಗರ – ಶೇ.40.98, ಹೂವಿನಹಡಗಲಿ – ಶೇ.40.30, ಹಗರಿಬೊಮ್ಮನಹಳ್ಳಿ-ಶೇ.43.34, ಕಂಪ್ಲಿ – ಶೇ.50.46, ಕೂಡ್ಲಿಗಿ – ಶೇ.47.46, ಸಂಡೂರು – ಶೇ.44.56, ವಿಜಯನಗರ – ಶೇ.44.28 ರಷ್ಟು ಮತದಾನವಾಗಿದೆ.

ಮಧ್ಯಾಹ್ನ 03ಗಂಟೆಯವರೆಗೆಒಟ್ಟು ಶೇ.56.76 ಮತದಾನ ಪ್ರಮಾಣವಾಗಿದ್ದು, ಬಳ್ಳಾರಿ ಗ್ರಾಮೀಣ-ಶೇ.55.36, ಬಳ್ಳಾರಿ ನಗರ – ಶೇ.50.77, ಹೂವಿನಹಡಗಲಿ – ಶೇ.56.56, ಹಗರಿಬೊಮ್ಮನಹಳ್ಳಿ- ಶೇ.58.16, ಕಂಪ್ಲಿ –ಶೇ.63.03,ಕೂಡ್ಲಿಗಿ-ಶೇ.60.63,

(2 ನೇ ಪುಟಕ್ಕೆ)

## ಮತ ಹಕ್ಕು ಚಲಾಯಿಸಿದ ಡಿಸಿ ಪ್ರಶಾಂತ್ ಕುಮಾರ್ ಮಿಶ್ರಾ

ಬಳ್ಳಾರಿ, ಮೇ 07: ಲೋಕಸಭೆ ಸಾರ್ವತ್ರಿಕ ಚುನಾವಣೆ 2024 ರ ಅಂಗವಾಗಿ ಮೇ 07 ರಂದು ಮಂಗಳವಾರ ನಡೆದ ಮತದಾನ ದಿನದಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು, ಸರಳಾದೇವಿ ಸತೀಶ್ಚಂದ್ರ ಅಗರವಾಲ್ ಪ್ರಥಮ ದರ್ಜೆ ಕಾಲೇಜಿನಲ್ಲಿ ತಮ್ಮ ಮತದಾನದ ಹಕ್ಕು ಚಲಾಯಿಸಿದರು. ಪ್ರಜಾಪ್ರಭುತ್ವ ಹಬ್ಬದಲ್ಲಿ ನನ್ನ ಮತದ ಹಕ್ಕನ್ನು ಚಲಾಯಿಸಿದ್ದೇನೆ. ಜಿಲ್ಲೆಯ ಎಲ್ಲಾ ಕ್ಷೇತ್ರದ ಮತದಾರರು ತಮ್ಮ ಮತವನ್ನು ಚಲಾಯಿಸಿರಿ ಎಂಬ ಸಂದೇಶ ನೀಡಿದರು.



## ಲೋಕಸಭಾ ಚುನಾವಣೆ; ಗದಗ ಜಿಲ್ಲೆಯಾದ್ಯಂತ ಬಿರುಸಿನ ಮತದಾನ

ಗದಗ ಮೇ 7:– ಲೋಕಸಭಾ ಚುನಾವಣೆಯ ಮತದಾನವು ಜಿಲ್ಲೆಯಾದ್ಯಂತ ಮಂಗಳವಾರ ಶಾಂತಿಯುತ ಹಾಗೂ ಬಿರುಸಿನಂದ ನಡೆಯಿತು.

ಬೆಳಗ್ಗೆ 9 ಗಂಟೆ ವೇಳೆಗೆ ಶೇ 8.7 ರಷ್ಟು, ಬೆಳಗ್ಗೆ 11 ಗಂಟೆ ವೇಳೆಗೆ ಶೇ 23.37 ರಷ್ಟು, ಮಧ್ಯಾಹ್ನ 1 ಗಂಟೆ ವೇಳೆಗೆ ಶೇ 41.57 ರಷ್ಟು, ಮಧ್ಯಾಹ್ನ 3 ಗಂಟೆ ವೇಳೆಗೆ ಶೇ 55.60 ರಷ್ಟು , ಹಾಗೆಯೇ ಸಂಜೆ 5 ಗಂಟೆ ವೇಳೆಗೆ 67.47 ರಷ್ಟು ಮತದಾನವಾಗಿತ್ತು.

ಜಿಲ್ಲೆಯ ನಾಲ್ಕು ವಿಧಾನಸಭಾ ಕ್ಷೇತ್ರದ ಒಟ್ಟು 961 ಮತಗಟ್ಟೆಗಳಲ್ಲಿ ಮತದಾರರು ಉತ್ಸಾಹ ಹಾಗೂ ಸಂಭ್ರಮದಿಂದ ಮತದಾನದ ಹಬ್ಬದಲ್ಲಿ ಪಾಲ್ಗೊಂಡಿದ್ದು ವಿಶೇಷವಾಗಿತ್ತು. ಬೆಳಗಿನ ವೇಳೆಯಲ್ಲಿ ಜಿಲ್ಲೆಯ ಎಲ್ಲಾ ಮತಗಟ್ಟೆಗಳಲ್ಲಿ ಸರತಿ ಸಾಲಿನಲ್ಲಿ ನಂತು ಮತಹಕ್ಕು ಚಲಾಯಿಸಿದ್ದು ಕಂಡುಬಂದಿತು. ಮತದಾರರು ಮತಹಕ್ಕು ಚಲಾಯಿಸಿ ಮತಗಟ್ಟೆಯಿಂದ ಹೊರಬರುತ್ತಿದ್ದ ದೃಶ್ಯವು ಮತದಾನದ ಹುಮ್ಮಸ್ಸನ್ನು ಹೆಚ್ಚಿಸಿತ್ತು. ಪ್ರಥಮ ಬಾರಿಗೆ ಮತಹಕ್ಕು ಚಲಾಯಿಸಿದ ಯುವ ಮತದಾರರು ಸಂತಸದಿಂದ ಮತ ದಾನ ಸಂಭ್ರಮದಲ್ಲಿ ಪಾಲ್ಗೊಂ ಡಿದ್ದರು.

ಗದಗ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರಾದ ಎಚ್.ಕೆ.ಪಾಟೀಲ ಅವರು ಹುಲಕೋಟಿಯ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಕೇಂದ್ರ ಶಾಲೆಯಲ್ಲಿ ಕುಟುಂಬ ಸಮೇತರಾಗಿ ಮತಹಕ್ಕು ಚಲಾಯಿಸಿದ್ದು ವಿಶೇಷವಾಗಿತ್ತು.

ಬಳಿಕ ಮಾತನಾಡಿದ ಸಚಿವರು ಪ್ರಜಾಪ್ರಭುತ್ವ ಹಬ್ಬದಲ್ಲಿ 18 ವರ್ಷ ಪೂರ್ಣಗೊಂಡವರೆಲ್ಲರೂ ಮತಹಕ್ಕು ಚಲಾಯಿಸಬೇಕು. ಇದರಿಂದ ಪ್ರಜಾಪ್ರಭುತ್ವವನ್ನು ಬಲಪಡಿಸಲು ಸಾಧ್ಯ ಎಂದು ಅಭಿಪ್ರಾಯಪಟ್ಟರು.

(2 ನೇ ಪುಟಕ್ಕೆ)



## ಚನ್ನರಾಜ ಹಟ್ಟಿಹೊಳಿ ಮತದಾನ

ಬೆಳಗಾವಿ:ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಲೋಕಸಭಾ ಚುನಾವಣೆಯ ಅಂಗವಾಗಿ ಮೊದಗಾ ಗ್ರಾಮದ ಮತಗಟ್ಟೆಗೆ ತೆರಳಿ, ಮತ ಚಲಾಯಿಸಿದರು.

ಉತ್ತಮ ಹಾಗೂ ಜನಪರ ಆಡಳಿತಕ್ಕಾಗಿ ಪ್ರತಿಯೊಬ್ಬರು ತಪ್ಪದೇ ಮತದಾನ ಮಾಡುವಂತೆ ಅವರು ಕೋರಿದ್ದಾರೆ.

ನಂತರ ಸುಳೇಭಾವಿಯ ಆದಿಶಕ್ತಿ ಶ್ರೀ ಮಹಾಲಕ್ಷ್ಮೀ ದೇವಿಯ ಸನ್ನಿಧಿಗೆ ಭೇಟಿಕೊಟ್ಟು, ದರ್ಶನ ಆಶೀರ್ವಾದ ಪಡೆದು, ನಾಡಿನ ಸುಖ, ಸಮೃದ್ಧಿಗಾಗಿ ಪ್ರಾರ್ಥಿಸಿದರು.



## ಬಿಜೆಪಿ- ಕಾಂಗ್ರೆಸ್ ಕಾರ್ಯಕರ್ತರ ಮಧ್ಯೆ ಮಾರಾಮಾರಿ ಓರ್ವನ ಮೇಲೆ ಮಾರಣಾಂತಿಕ ಹಲ್ಲೆ

ಯರಗಟ್ಟಿ : ಭಂಡಾರ ಗ್ರಾಮದಲ್ಲಿ ಕಾಂಗ್ರೆಸ್, ಬಿಜೆಪಿ ಕಾರ್ಯಕರ್ತರ ಮಧ್ಯೆ ಗಲಾಟೆ ನಡೆದಿದ್ದು, ಓರ್ವ ಕಾಂಗ್ರೆಸ್ ಕಾರ್ಯಕರ್ತನ ಮೇಲೆ ಮಾರಣಾಂತಿಕ ಹಲ್ಲೆ ನಡೆದಿದೆ.

ಸವದತ್ತಿ ಯಲ್ಲಮ್ಮ ಮತಕ್ಷೇತ್ರದ ಭಂಡಾರಹಳ್ಳಿ ಗ್ರಾಮದ ಬೂತ್ ನಂಬರ್ 88ರಲ್ಲಿ ಗಲಾಟೆ ನಡೆದಿದೆ. ಕಾಂಗ್ರೆಸ್ ಬೂತ್ ಏಜೆಂಟ್ ಮೇಲೆ ಬಿಜೆಪಿ ಕಾರ್ಯಕರ್ತರಿಂದ ಹಲ್ಲೆ ನಡೆದಿದೆ ಎಂದು ಆರೋಪಿಸಲಾಗಿದೆ.

ಸವದತ್ತಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ. ಭಂಡಾರಹಳ್ಳಿಯ ಹಣಮಂತಪ್ಪಾ ಭೀಮಪ್ಪಾ ಅರಭಾಂವಿ (ವಯಸ್ಸು 48 ವರ್ಷ) ದೂರು ದಾಖಲಿಸಿದ್ದಾರೆ.ವಿಠ್ಠಲ ಅರ್ಜುನ ನಿಕ್ಕಂ, ಬುಜಂಗ ಕೃಷ್ಣಾಜಿರಾವ್ ನಿಕ್ಕಂ, ಸುನೀಲ ಮಾರುತಿರಾವ್ ನಿಕ್ಕಂ, ಪುಂಡಲೀಕ ಮಾರುತಿರಾವ್ ನಿಕ್ಕಂ ಹಾಗೂ ನಾಗಪ್ಪಾ ಮಹಾದೇವಪ್ಪಾ ಬನ್ನೂರು ಎನ್ನುವವರ ಮೇಲೆ ದೂರು ದಾಖಲಿಸಲಾಗಿದೆ.



ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಸಿದ ಸವದತ್ತಿ ಸಿಪಿಐ ಸುರೇಶ ಬಂಡೆಗು ಬಳಪ್ರಕರಣದಾಖಲಿಸಿಕೊಂಡಿದ್ದಾರೆ.

## ಅರಭಾವಿ ಕ್ಷೇತ್ರ: ಶೇ. 71.92 ರಷ್ಟು ಮತದಾನ

ಮೂಡಲಗಿ: ಬೆಳಗಾವಿ ಲೋಕಸಭಾ ಚುನಾವಣೆಯ ವ್ಯಾಪ್ತಿಯ ಅರಭಾವಿ ಮತಕ್ಷೇತ್ರದಲ್ಲಿ ಮಂಗಳವಾರ ನಡೆದ ಚುನಾವಣೆಯು ಶಾಂತಿಯುತವಾಗಿ ಜರುಗಿ ಶೇ. 71.92 ರಷ್ಟು ಮತದಾನವಾಗಿದೆ.

ಬಿಸಿಲಿನ ತಾಪಕ್ಕೆ ಹೆದರಿ ಮೂಡಲಗಿ ಪಟ್ಟಣದಲ್ಲಿ ಕೆಲವರು ಮುಂಜಾನೆ ವಾಯು ವೀಹಾರಕ್ಕೆ ತೇರಳಿದ ಸಮಯದಲ್ಲಿ ಮತಗಟ್ಟೆಗೆ ತೆರಳಿ ಮತ ಚಲಾಯಿಸಿರುವುದು ಕಂಡುಬಂತ್ತು. ಮತದಾನ ಅತ್ಯಂತ ವೇಗವಾಗಿ ಸಾಗುತ್ತಿದ್ದರೂ ಮಧ್ಯಾಹ್ನದ ವೇಳೆಗೆ ಅತ್ಯಧಿಕ ಬಿಸಿಲಿನ ಪರಿಣಾಮ ಕಡಿಮೆಯಾದರು ಸಹ ಸಂಜೆ ವೇಳೆಗೆ ಮತ್ತೆ ಹೆಚ್ಚಿನ ಸಂಖ್ಯೆಯಲ್ಲಿ ಮತದಾರರು ಮತಗಟ್ಟೆಗ ಆಗಮಿಸಿ ಮತ ಚಲಾಯಿಸಿದರು.

ಮುಂಜಾಣೆ 9ಗಂಟೆವರಿಗೆ ಶೇ.9.76, 11ಗಂಟೆಗೆ ಶೇ.24.19, ಮಧ್ಯಾಹ್ನ 1ಗಂಟೆಗೆ ಶೇ.41.23, 3 ಗಂಟೆಗೆ ಶೇ.54.85, 5ಗಂಟೆಗೆ ಶೇ.67.08 ಮತ್ತು 6ಗಂಟೆವರಿಗೆ ಶೇ.71.92 ರಷ್ಟು ಮತದಾನವಾಗಿದೆ. ಈ ಚುನಾವಣೆಯಲ್ಲಿ ಪ್ರಥಮ ಬಾರಿಗೆ ಮತದಾನದ ಅವಕಾಶ ಸಿಕ್ಕ ಯುವಕ-ಯುವತಿಯರು, ಉತ್ಸಾಹದಿಂದಲೇ ತಮ ಹಕ್ಕನ್ನು ಚಲಾಯಿಸಿರು.

### ಜಿಲ್ಲಾಧಿಕಾರಿಗಳಿಂದ ಮತದಾನ * ಜಿಪಂ ಸಿಇಒ ...

## ಲೋಕಸಭಾ ಚುನಾವಣೆಯ ಮತದಾನ ಸುಗಮ ಆರಂಭ, ಶಾಂತಿಯುತ



ಹೊಸಪೇಟೆ (ವಿಜಯನಗರ) ಮೇ.07 : ಮೇ 7ರಂದು ವಿಜಯನಗರ ಜಿಲ್ಲೆಯ ವಿಯನಗರ ಸೇರಿದಂತೆ ವಿವಿಧ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಲೋಕಸಭಾ ಚುನಾವಣೆಯ ಮತದಾನ ಕಾರ್ಯವು ಬೆಳಗ್ಗೆ 7 ರಿಂದಲೇ ಸುಗಮವಾಗಿ ಆರಂಭವಾಯಿತು.

ಬೆಳಗಿನ ತಂಪತ್ತಿನ ಅವಧಿಯಲ್ಲಿ ವಿವಿಧ ಮತಗಟ್ಟೆಗಳ ಅಂಗಳದಲ್ಲಿ ಮತದಾರರು ಸಾಲುಸಾಲಾಗಿ ನಂತು ಮತದಾನ ಮಾಡುತ್ತಿವುದು ಕಂಡು ಬಂದಿತು. ಯುವ ಮತದಾರರು, ವಯೋವೃದ್ಧರು ಸೇರಿದಂತೆ ಎಲ್ಲಾ ವಂಯೋವಮಾನದವರು, ವಿಕಲಚೇತನರು ಉತ್ಸಾಹದಿಂದ ಮತದಾನದಲ್ಲಿ ಪಾಲ್ಗೊಂಡಿದ್ದು ಕಂಡು ಬಂದಿತು. ಸಾಂಪ್ರದಾಯಿ ಮತಗಟ್ಟೆಗಳು, ಸಖಿ ಮತಗಟ್ಟೆ, ವಿಕಲಚೇತನ ಸ್ನೇಹಿ ಮತಗಟ್ಟೆಗಳಲ್ಲಿ ಮತದಾನದ ಸಂಭ್ರಮ ಕಂಡು ಬಂದಿತು.

ಜಿಲ್ಲಾಧಿಕಾರಿಗಳಿಂದ ಮತದಾನ: ವಿಜಯನಗರ ಜಿಲ್ಲೆಂಯ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿಗಳಾದ ಎಂ.ಎಸ್.ದಿವಾಕರ ಅವರು ಮೇ 7ರಂದು ಹೊಸಪೇಟೆ ನಗರದ ಸಂಡೂರ ರಸ್ತೆಯಲ್ಲಿನ ಕ್ಷೇತ್ರ ಶಿಕ್ಷಾಧಿಕಾರಿಗಳ ಕಚೇರಿ ಆವರಣಕ್ಕೆ ದಂಪತಿ ಸಮೇತ ಆಗಮಿಸಿ ಮತ ಚಲಾಯಿಸಿದರು. ಕ್ಷೇತ್ರ ಶಿಕ್ಷಾಧಿಕಾರಿಗಳ ಕಚೇರಿ ಆವರಣಕ್ಕೆ ಮತ ಚಲಾಯಿಸಲು ಆಗಮಿಸಿದಾಗ ಜಿಲ್ಲಾಧಿಕಾರಿಗಳು ವಯೋವೃದ್ಧೆಯೊಂದಿಗೆ ಆತ್ಮೀಯವಾಗಿ ಮಾತನಾಡಿ ಮತಗಟ್ಟೆಗೆ ಕಳುಹಿಸಿದರು.

ಜಿಪಂ ಸಿಇಓ ಭೇಟಿ: ವಿಜಯನಗರ ಜಿಲ್ಲಾ ಪಂಚಾಯುತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಸದಾಶಿವ ಪ್ರಭು ಅವರು ಮೇ 7ರಂದು ವಿಜಯನಗರ ವಿಧಾನಸಭಾ

(2 ನೇ ಪುಟಕ್ಕೆ)